**ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ**

**ಸಹಾಯಕ ಅಭಿಯಂತರರ ಕಛೇರಿ, ವಾರ್ಡ್ ಸಂಖ್ಯೆ: 163, ಕತ್ರಿಗುಪ್ಪೆ, ಬೆಂಗಳೂರು.**

# ಸೆಪ್ಟಂಬರ್–2022ರ ಮಾಹೆಯ 1ನೇ ಶನಿವಾರದ ವಾರ್ಡ್ ಸಮಿತಿ ಸಭೆಯ ನಡವಳಿಗಳು

***********

ವಿಷಯ: ಮಾನ್ಯ ಆಯುಕ್ತರು, ಬಿ.ಬಿ.ಎಂ.ಪಿ ರವರ ಕಛೇರಿ ಆದೇಶದ ಸಂಖ್ಯೆ: ಬಿ12(5)/ಪಿಆರ್/35/2020–21, ದಿನಾಂಕ: 21–09–2020ರ ಆದೇಶದಂತೆ ವಾರ್ಡ್ ಸಂಖ್ಯೆ: 163, ಕತ್ರಿಗುಪ್ಪೆಯಲ್ಲಿ ವಾರ್ಡ್ ಕಛೇರಿಯಲ್ಲಿ ನಡೆದ ಸೆಪ್ಟಂಬರ್ ತಿಂಗಳ 1ನೇ ಶನಿವಾರದ ವಾರ್ಡ್ ಸಮಿತಿ ಸಭೆಯ ನಡವಳಿಗಳು.

*****

ದಿನಾಂಕ: 03–09–2022

ಸ್ಥಳ : ಬಿಬಿಎಂಪಿ ವಿವಿಧೋದ್ದೇಶ ಕಟ್ಟಡ, ಶ್ರೀಕಂಠೇಶ್ವರ ಪಾರ್ಕ್ ಹತ್ತಿರ

ಸಮಯ : ಬೆಳಿಗ್ಗೆ 11.30 ಗಂಟೆಗೆ

**ಹಾಜರಿದ್ದ ಸದಸ್ಯರು ಮತ್ತು ಅಧಿಕಾರಿಗಳ ವಿವರ**

| ಕ್ರ.ಸಂ | ಹೆಸರು | ಪದನಾಮ |
|---|---|---|
| 1. | ಶ್ರೀ ದಯಾನಂದ್ | ಅಧ್ಯಕ್ಷರು ಮತ್ತು ನೋಡಲ್ ಅಧಿಕಾರಿಗಳು |
| 2. | ಕುಮಾರಿ ರಂಜಿತಾ ಕೆ.ಆರ್ | ಸಹಾಯಕ ಅಭಿಯಂತರರು, ಕಾರ್ಯದರ್ಶಿ ಮತ್ತು ಸಂಚಾಲಕರು ವಾರ್ಡ್ 163, ಕತ್ರಿಗುಪ್ಪೆ |
| 3. | ಶ್ರೀ ಗಂಗಾಧರ್ | ಕಂದಾಯ ವಸೂಲಿಗಾರರು, ವಾರ್ಡ್ ನಂ. 163 |
| 4. | ಶ್ರೀ ಉಮೇಶ್ | ಹಿರಿಯ ಆರೋಗ್ಯ ಪರಿವೀಕ್ಷಕರು ವಾರ್ಡ್–163 |
| 5. | ಶ್ರೀ ಲಕ್ಷ್ಮಿ | ಕಿರಿಯ ಆರೋಗ್ಯ ಪರಿವೀಕ್ಷಕರು ವಾರ್ಡ್–163 |
| 6. | ಕುಮಾರಿ ಕೃತಿ | ವೈದ್ಯಾಧಿಕಾರಿಗಳು (ಕೋವಿಡ್–19) |
| 7. | ಕುಮಾರಿ ವೇದ ನಿರ್ಮಲ | ಬೀಟೆಕ್ ಸಿವಿಕ್ ಲೀಡರ್ |
| 8. | ಶ್ರೀ ರವಿಕುಮಾರ್ | ಸಾರ್ವಜನಿಕರು |
| 9. | ಶ್ರೀ ಹರಿಪ್ರಸಾದ್ | ಸಾರ್ವಜನಿಕರು |
| 10. | ಶ್ರೀ ರಾಜೇಶ್ | ಸಾರ್ವಜನಿಕರು |

ಅಧ್ಯಕ್ಷರು ಮತ್ತು ನೋಡಲ್ ಅಧಿಕಾರಿಗಳಾದ ಶ್ರೀ ದಯಾನಂದ್ ರವರು ಸ್ವ ಪರಿಚಯ ಮಾಡಿಕೊಂಡು ಸ್ವಾಗತ ಕೋರಿ ಸಭೆಯನ್ನು ಪ್ರಾರಂಭಿಸಲಾಯಿತು.

1. ಕತ್ರಿಗುಪ್ಪೆ ವಾರ್ಡ್–163ರ ವ್ಯಾಪ್ತಿಯಲ್ಲಿನ ಕತ್ರಿಗುಪ್ಪೆ ಮುಖ್ಯರಸ್ತೆಯ ಹೆಬ್ಬಾಗಿಲು ಹತ್ತಿರ ಕಸದ ಲಾರಿಗಳನ್ನು ನಿಲ್ಲಿಸುತ್ತಿದ್ದು, ಸದರಿ ಲಾರಿಗಳಿಂದ ತ್ಯಾಜ್ಯ ಚರಂಡಿಗಳಿಗೆ ತುಂಬಿಕೊಂಡಿರುವುದರಿಂದ ಸದರಿ ಚರಂಡಿಗಳಲ್ಲಿ ನೀರು ಸರಾಗವಾಗಿ ಹರಿಯುತ್ತಿಲ್ಲವಾದ್ದರಿಂದ ಸದರಿ ಕಸದ ಲಾರಿಗಳನ್ನು ಸದರಿ ಸ್ಥಳದಿಂದ ತೆರವುಗೊಳಿಸಿ, ಚರಂಡಿಗಳಿಂದ ಹೂಳನ್ನು ತೆಗೆದು ನೀರು ಸರಾಗವಾಗಿ ಹರಿಯುವಂತೆ ಕ್ರಮವಹಿಸಬೇಕೆಂದು ವಾರ್ಡ್ ಅಭಿಯಂತರರಿಗೆ ಅಧ್ಯಕ್ಷರು ಸಭೆಯಲ್ಲಿ ತಿಳಿಸಿರುತ್ತಾರೆ.

2. ವಾರ್ಡ್–163ರ ವ್ಯಾಪ್ತಿಯಲ್ಲಿನ ಬೀದಿ ಬದಿ ವ್ಯಾಪಾರಿಗಳು ಪಾದಚಾರಿ ಮಾರ್ಗವನ್ನು ಅತಿಕ್ರಮಿಸಿ ವ್ಯಾಪಾರ ವಹಿವಾಟು ನಡೆಸುತ್ತಿದ್ದು, ಇದರಿಂದ, ಪಾದಚಾರಿಗಳಿಗೆ ಮತ್ತು ವಾಹನ ಸಂಚಾರಕ್ಕೆ ಅಡಚಣೆಯಾಗುತ್ತಿರುವುದಾಗಿ ಸಭೆಯಲ್ಲಿ ಚರ್ಚಿಸಲಾಗಿದ್ದು, ಸದರಿ ಬೀದಿ ಬದಿ ವ್ಯಾಪಾರಿಗಳನ್ನು ಕೂಡಲೇ ತೆರವುಗೊಳಿಸಬೇಕೆಂದು ವಾರ್ಡ್‌ನ ಹಿರಿಯ ಆರೋಗ್ಯ ಪರಿವೀಕ್ಷಕರಿಗೆ ಅಧ್ಯಕ್ಷರು ಸಭೆಯಲ್ಲಿ ತಿಳಿಸಿರುತ್ತಾರೆ.

3. ವಾರ್ಡ್–163ರ ವ್ಯಾಪ್ತಿಯಲ್ಲಿನ ಪಾದಚಾರಿ ಮಾರ್ಗದಲ್ಲಿ ಸಾರ್ವಜನಿಕರು ದ್ವಿಚಕ್ರ ವಾಹನಗಳನ್ನು ನಿಲ್ಲಿಸುತ್ತಿದ್ದು, ಸದರಿ ದ್ವಿಚಕ್ರ ವಾಹನಗಳನ್ನು ಕೂಡಲೇ ತೆರವುಗೊಳಿಸಿ ಪಾದಚಾರಿಗಳ ಓಡಾಟಕ್ಕೆ ಅನುವು ಮಾಡಿಕೊಡುವಂತೆ ವಾರ್ಡ್ ಅಭಿಯಂತರರಿಗೆ ಅಧ್ಯಕ್ಷರು ಸಭೆಯಲ್ಲಿ ತಿಳಿಸಿರುತ್ತಾರೆ.

4. ವಾರ್ಡ್ ವ್ಯಾಪ್ತಿಯಲ್ಲಿ ಇರುವ ರಸ್ತೆಗುಂಡಿಗಳನ್ನು ಮುಚ್ಚುವುದು, ಚರಂಡಿಗಳನ್ನು ದುರಸ್ಥಿಗೊಳಿಸುವುದು ಮತ್ತು ಹಾಳಾಗಿರುವ ರಸ್ತೆಗಳ ಕಾಮಗಾರಿಯನ್ನು ತುರ್ತಾಗಿ ಕೈಗೆತ್ತಿಕೊಂಡು ನಿರ್ವಹಿಸಲು ಸಂಬಂಧಪಟ್ಟ ವಾರ್ಡ್ ಅಭಿಯಂತರರಿಗೆ ತಿಳಿಸಲಾಯಿತು.

5. ವಾರ್ಡ್–163ರ ವ್ಯಾಪ್ತಿಯಲ್ಲಿನ ವಸತಿ ಪ್ರದೇಶಗಳಲ್ಲಿ ಸೊಳ್ಳೆಗಳು ಹೆಚ್ಚಾಗುತ್ತಿದ್ದು, ಇದರಿಂದ, ಅನೇಕ ರೋಗಗಳು ಹರಡುವ ಸಾಧ್ಯತೆ ಇರುವುದರಿಂದ ವಾರ್ಡ್ ವ್ಯಾಪ್ತಿಯಲ್ಲಿ ಸೊಳ್ಳೆ ಔಷಧಿ ಸಿಂಪಡಣೆ ಕಾರ್ಯ ಕೈಗೊಳ್ಳುವಂತೆ ಸಭೆಯಲ್ಲಿ ಹಾಜರಿದ್ದ ಹಿರಿಯ ಆರೋಗ್ಯ ಪರಿವೀಕ್ಷಕರಿಗೆ ಅಧ್ಯಕ್ಷರು ಸಭೆಯಲ್ಲಿ ತಿಳಿಸಿರುತ್ತಾರೆ.

6. ಕತ್ರಿಗುಪ್ಪೆ ವಾರ್ಡ್–163ರ ಕಂದಾಯ ಬಾಕಿಯನ್ನು ವಸೂಲಿ ಮಾಡಲು ವಾರ್ಡ್ ಮಟ್ಟದಲ್ಲಿ ಜಾತಾ ಕಾರ್ಯಕ್ರಮವನ್ನು ಹಮ್ಮಿಕೊಂಡು ಕಂದಾಯ ವಸೂಲಾತಿ ಮಾಡಲು ಕ್ರಮವಹಿಸಲಾಗುವುದು ಎಂದು ಕಂದಾಯ ಪರಿವೀಕ್ಷಕರು ಸಭೆಯಲ್ಲಿ ತಿಳಿಸಿರುತ್ತಾರೆ.

ಮೇಲಿನ ಎಲ್ಲಾ ಅಂಶಗಳಿಗೆ ಸಂಬಂಧಪಟ್ಟಂತೆ ಅಧಿಕಾರಿಗಳೊಂದಿಗೆ ಕೂಲಂಕುಶವಾಗಿ ಚರ್ಚಿಸಿದ್ದು, ಸದರಿ ವಿಷಯಗಳ ಬಗ್ಗೆ ಕ್ರಮಕೈಗೊಳ್ಳಲು ಸರ್ವಾನುಮತದಿಂದ ತೀರ್ಮಾನಿಸಿ ವಂದನೆಗಳೊಂದಿಗೆ ಈ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

03/09/2022

ಕಾರ್ಯದರ್ಶಿಗಳು
ಹಾಗೂ ಸಹಾಯಕ ಅಭಿಯಂತರರು
ವಾರ್ಡ್ ಸಂಖ್ಯೆ: 163, ಕತ್ರಿಗುಪ್ಪೆ

ಅಧ್ಯಕ್ಷರು
ಹಾಗೂ ನೋಡಲ್ ಅಧಿಕಾರಿಗಳು
ವಾರ್ಡ್ ಸಂಖ್ಯೆ: 163, ಕತ್ರಿಗುಪ್ಪೆ

ಪ್ರತಿಯನ್ನು:

1. ಮಾನ್ಯ ಮುಖ್ಯ ಆಯುಕ್ತರು, ಬೃ.ಬೆ.ಮ.ಪಾಲಿಕೆ, ಎನ್. ಆರ್. ವೃತ್ತ ರವರ ಮಾಹಿತಿಗೆ ತರಲು ಆಪ್ತ ಶಾಖೆಗೆ ಸಲ್ಲಿಸಿದೆ.
2. ಮಾನ್ಯ ವಲಯ ಆಯುಕ್ತರು(ದಕ್ಷಿಣ) ಬೃ.ಬೆ.ಮ.ಪಾಲಿಕೆ, ರವರ ಮಾಹಿತಿಗೆ ತರಲು ಆಪ್ತ ಶಾಖೆಗೆ ಸಲ್ಲಿಸಿದೆ.
3. ಮಾನ್ಯ ವಿಶೇಷ ಆಯುಕ್ತರು (ಆಡಳಿತ) ರವರ ಮಾಹಿತಿಗಾಗಿ ಸಲ್ಲಿಸಿದೆ.
4. ಮಾನ್ಯ ವಿಶೇಷ ಆಯುಕ್ತರು (ಆರೋಗ್ಯ & ಘ.ತ್ಯಾ.ನಿ) ರವರ ಮಾಹಿಗಾಗಿ ಸಲ್ಲಿಸಿದೆ.
5. ಮಾನ್ಯ ಉಪ ಆಯುಕ್ತರು ((ಆಡಳಿತ) ರವರ ಮಾಹಿಗಾಗಿ ಸಲ್ಲಿಸಿದೆ.
6. ಮಾನ್ಯ ಜಂಟಿ ಆಯುಕ್ತರು (ದಕ್ಷಿಣ) ರವರ ಮಾಹಿಗಾಗಿ ಸಲ್ಲಿಸಿದೆ.
7. ಮುಖ್ಯ ಅಭಿಯಂತರರು (ದಕ್ಷಿಣ) ರವರ ಅವಗಾಹನೆಗೆ ಸಲ್ಲಿಸಿದೆ.
8. ವಾರ್ಡ್ ಸಮಿತಿ ಸದಸ್ಯರ ಮಾಹಿತಿಗಾಗಿ ಕಳುಹಿಸಿದೆ.
9. ವಾರ್ಡ್ ಕಛೇರಿಯ ಸೂಚನಾ ಫಲಕಕ್ಕೆ
10. ಕಛೇರಿ ಪ್ರತಿ.